**ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ, ಹುಬ್ಬಳ್ಳಿ.**

**OS: 226-23** **PW-1**

**ಸತ್ಯ ಪ್ರತಿಜ್ಞೆ ಮೇರೆಗೆ ದಿನಾಂಕಃ 18.07.2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ S M K ವಕೀಲರಿಂದ ಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ದಾಖಲಿಸಿದ್ದು ಅದರಲ್ಲಿರುವ ಸಂಗತಿಗಳು ಸತ್ಯ ಹಾಗೂ ಸರಿ ಇರುತ್ತವೆ. ನಾನು ಈ ಕೆಳಕಂಡ ದಾಖಲೆಗಳನ್ನು ಹಾಜರಪಡಿಸಿದ್ದೇನೆ.

ಒಂದನೇ ಪ್ರತಿವಾದಿಯ ಗಂಡ ಹಾಗೂ ಎರಡನೇ ಪ್ರತಿವಾದಿಯ ತಂದೆ ಮೋಹನ್ ಈಟಿ ಇವರು ಬರೆದುಕೊಟ್ಟ ಮೂಲ ನೋಂದಾಯಿತ ಖರೀದಿ ಕರಾರು ಪತ್ರವನ್ನು ನಿಪಿ.1 ಎಂದು ಗುರುತಿಸಲಾಯಿತು.

ದಾವಾ ಆಸ್ತಿಯ ಪಹಣಿ ಪತ್ರಿಕೆ ಹಾಜರಪಡಿಸಿದ್ದು ಅದನ್ನು ನಿಪಿ.2 ಎಂದು ಗುರುತಿಸಲಾಯಿತು.

ದಿಃ 15.2.2022 ರಂದು ಪ್ರತಿವಾದಿಗಳಿಗೆ ನಮ್ಮ ವಕೀಲರ ಮೂಲಕ ಕೊಟ್ಟ ನೋಟಿಸಿನ ಸ್ಥಳ ಪ್ರತಿಯನ್ನು ನಿಪಿ.3 ಎಂದು ಗುರುತಿಸಲಾಯಿತು. ಅದನ್ನು ಪ್ರತಿವಾದಿ ಸ್ವೀಕರಿಸದೆ ನಮ್ಮ ವಕೀಲರಿಗೆ ಪರತ ಬಂದಿದ್ದು, ಆ ಲಕೋಟೆಯನ್ನು ನಿಪಿ.3 (ಎ) ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದರು, ಸಮಯ ನೀಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೆ.ಸ.ಎ. ಒಪ್ಪಿಕೊಳ್ಳಲಾಯಿತು.

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,
ಹಾಗೂ ಜೆ.ಎಂ.ಎಫ್.ಸಿ. ಹುಬ್ಬಳ್ಳಿ.